ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಸ್ವಚ್ಛಭಾರತ ಮಿಷನ್ ಯೋಜನೆಯಡಿಯ ಶೌಚಾಲಯಗಳ ಬಿಲ್ಲು ಪಾವತಿ ಕುರಿತು

ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

555 (568) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017-18 ಮತ್ತು 2018-19ನೇ ಸಾಲಿನಲ್ಲಿ ಸ್ವಚ್ಛಭಾರತ ಮಿಷನ್ ಅಡಿ ಬೆಳಗಾವಿ ಜಿಲ್ಲೆಯಲ್ಲಿ ಈವರೆಗೆ ಎಷ್ಟು ಶೌಚಾಲಯ ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಡಿ ಶೌಚಾಲಯ ನಿರ್ಮಾಣ ಮಾಡಿಕೊಂಡ ಫಲಾನುಭವಿಗಳಿಗೆ ಪೂರ್ಣ ಪ್ರಮಾಣದ ಬಿಲ್ಲು ಸಂದಾಯ ಮಾಡಲಾಗಿದೆಯೇ ;

(ಇ) ಈವರೆಗೆ ಪೂರ್ಣ ಬಿಲ್ಲು ಸಂದಾಯ ಮಾಡಿದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಈ) ಬಿಲ್ಲು ಸಂದಾಯ ಮಾಡದೆ ಬಾಕಿ ಉಳಿದ ಫಲಾನುಭವಿಗಳ ಸಂಖ್ಯೆ ಎಷ್ಟು ; ಬಿಲ್ಲು ಬಾಕಿ ಉಳಿಯಲು ಕಾರಣವೇನು ; ಈ ಫಲಾನುಭವಿಗಳಿಗೆ ಕೂಡಲೇ ಬಿಲ್ಲು ಸಂದಾಯ ಮಾಡಲಾಗುವುದೇ? (ವಿವರ ನೀಡುವುದು)